ಕರ್ನಾಟಕ ಸರ್ಕಾರ

# ಕಾಲೇಜು ಶಿಕ್ಷಣ ಇಲಾಖೆ

ಸಂಖ್ಯೆ: ಕಾಶಿಇ/ನೇವಿ-1/ಅಉಅ/13/2021-22

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,
ಬೆಂಗಳೂರು, ದಿನಾಂಕ:02-12-2021.

## ಅಧಿಕೃತ ಜ್ಞಾಪನ

ವಿಷಯ: 2020-21 ನೇ ಸಾಲಿನ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಹೆಚ್ಚುವರಿಯಾಗಿ ಆಯ್ಕೆ ಮಾಡಿಕೊಂಡಿರುವ ಅತಿಥಿ ಉಪನ್ಯಾಸಕರ ಅನುಮೋದನೆ ಬಗ್ಗೆ.

ಉಲ್ಲೇಖ: 1. ಈ ಕಛೇರಿಯ ಇದೇ ಕ್ರಮಾಂಕದ ಸುತ್ತೋಲೆ ದಿನಾಂಕ:07-05-2021.
2. ವಿವಿಧ ಕಾಲೇಜುಗಳಿಂದ ಸ್ವೀಕೃತವಾಗಿರುವ ಮನವಿಗಳು.

*******

ಕಾಲೇಜು ಶಿಕ್ಷಣ ಇಲಾಖೆಯ ವ್ಯಾಪ್ತಿಯಲ್ಲಿ ಬರುವ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ 2020-21 ನೇ ಶೈಕ್ಷಣಿಕ ಸಾಲಿನ 2, 4 & 6 ನೇ ಸೆಮಿಸ್ಟರ್ ಅವಧಿಯ ಪದವಿ ಮತ್ತು ಸ್ನಾತಕೋತ್ತರ ಪದವಿ ತರಗತಿಗಳ ಹೆಚ್ಚುವರಿ ಬೋಧನಾ ಕಾರ್ಯಭಾರಕ್ಕನುಗುಣವಾಗಿ ಅವಶ್ಯವಿರುವ ಅತಿಥಿ ಉಪನ್ಯಾಸಕರನ್ನು ನಿಗಧಿಪಡಿಸಿದ ಸಂಖ್ಯಾಮಿತಿಗೊಳಪಟ್ಟು ಅತಿಥಿ ಉಪನ್ಯಾಸಕರನ್ನು ಆಯ್ಕೆ ಮಾಡಿಕೊಳ್ಳಲು ಉಲ್ಲೇಖ-(1)ರ ಈ ಕಛೇರಿ ಸುತ್ತೋಲೆಯಲ್ಲಿ ಅನುಮತಿ ನೀಡಲಾಗಿದೆ. ಆದರೆ, ಕೆಲವು ಕಾಲೇಜುಗಳಲ್ಲಿ ಕಾರ್ಯಭಾರ ಹೆಚ್ಚಳದಿಂದಾಗಿ ಅನುಮತಿಸಿರುವ ಸಂಖ್ಯಾಮಿತಿಗಿಂತ ಹೆಚ್ಚಿನ ಸಂಖ್ಯೆಯಲ್ಲಿ ಅತಿಥಿ ಉಪನ್ಯಾಸಕರನ್ನು ನೇಮಕ ಮಾಡಿಕೊಂಡು ಅನುಮೋದನೆ ನೀಡುವಂತೆ ಕೋರಿ ಪ್ರಾಂಶುಪಾಲರು ಉಲ್ಲೇಖ-(2) ರಲ್ಲಿ ಮನವಿಗಳನ್ನು ಸಲ್ಲಿಸಿರುತ್ತಾರೆ.

ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ 2020-21 ನೇ ಶೈಕ್ಷಣಿಕ ಸಾಲಿನ 2, 4 & 6 ನೇ ಸೆಮಿಸ್ಟರ್ ಅವಧಿಯ ಪದವಿ ಮತ್ತು ಸ್ನಾತಕೋತ್ತರ ಪದವಿ ತರಗತಿಗಳ ಹೆಚ್ಚುವರಿ ಬೋಧನಾ ಕಾರ್ಯಭಾರಕ್ಕನುಗುಣವಾಗಿ ಆಯ್ಕೆ ಮಾಡಿಕೊಂಡಿರುವ ಅತಿಥಿ ಉಪನ್ಯಾಸಕರ ಸಂಖ್ಯಾ ಮಾಹಿತಿಯನ್ನು E.M.I.S ನಿಂದ ಪಡೆಯಲಾಗಿದ್ದು, ಸದರಿ ಸಂಖ್ಯಾ ಮಾಹಿತಿಯ ಆಧಾರದ ಮೇಲೆ ಉಲ್ಲೇಖ-(1) ರ ಈ ಕಛೇರಿ ಸುತ್ತೋಲೆಯಲ್ಲಿ ಅತಿಥಿ ಉಪನ್ಯಾಸಕರನ್ನು ಆಯ್ಕೆ ಮಾಡಿಕೊಳ್ಳಲು ಅನುಮತಿಸಿರುವ ಸಂಖ್ಯಾಮಿತಿಗಿಂತ ಈ ಕೆಳಕಂಡ ಕಾಲೇಜುಗಳಲ್ಲಿ ಕಾರ್ಯಭಾರ ಹೆಚ್ಚಳದ ಹಿನ್ನೆಲೆಯಲ್ಲಿ ಹೆಚ್ಚುವರಿಯಾಗಿ ಆಯ್ಕೆಮಾಡಿಕೊಂಡಿರುವ ಅತಿಥಿ ಉಪನ್ಯಾಸಕರಿಗೆ ಅನುಮೋದನೆ ನೀಡಲಾಗಿದೆ. ಅನುಮೋದನೆಯಾದ/ಆಯ್ಕೆಮಾಡಿಕೊಂಡ ಅತಿಥಿ ಉಪನ್ಯಾಸಕರ ವಿವರಗಳನ್ನು E.M.I.S ನಲ್ಲಿ ಕಡ್ಡಾಯವಾಗಿ ಅಪ್ಲೋಡ್ ಮಾಡುವುದು.

| ಕ್ರ. ಸಂ | ಕಾಲೇಜುಗಳು | ಈ ಕಛೇರಿ ಸುತ್ತೋಲೆ ದಿ:07-05-2021 ರಲ್ಲಿ ಅನುಮತಿಸಲಾಗಿದ್ದ ಅತಿಥಿ ಉಪನ್ಯಾಸಕರ ಸಂಖ್ಯೆ | ಆಯ್ಕೆ ಮಾಡಿಕೊಂಡಿರುವ ಅತಿಥಿ ಉಪನ್ಯಾಸಕರ ಸಂಖ್ಯೆ (E.M.I.S ನಲ್ಲಿ ಲಭ್ಯವಿರುವ ಮಾಹಿತಿ) | ಬಾಕಿ/ ಉಳಿಕೆ | ಹೆಚ್ಚುವರಿಯಾಗಿ ಕೋರಿರುವ ಅತಿಥಿ ಉಪನ್ಯಾಸಕರ ಸಂಖ್ಯೆ | ಕೋರಿಕೆಗನುಗುಣವಾಗಿ ಅನುಮತಿಸಲಾದ ಅತಿಥಿ ಉಪನ್ಯಾಸಕರ ಸಂಖ್ಯೆ |
|---|---|---|---|---|---|---|
| 1 | 2 | 3 | 4 | 5 | 6 | 7 |
| 1 | ಸ.ಪ್ರ.ದ.ಕಾ., ಸಿದ್ಧಾರ್ಥನಗರ, ಮೈಸೂರು | 28 | 32 | -4 | 8 | 8 |
| 2 | ಸ.ಪ್ರ.ದ.ಕಾ., ಮೇಲುಕೋಟೆ, ಮಂಡ್ಯ | 14 | 16 | -2 | 1 | 1 |
| 3 | ಸರ್ಕಾರಿ ವಿಜ್ಞಾನ ಕಾಲೇಜು, ಚಿತ್ರದುರ್ಗ | 175 | 180 | -5 | 4 | 4 |
| 4 | ಸ.ಪ್ರ.ದ.ಕಾ., ಬರಮಸಾಗರ, ಚಿತ್ರದುರ್ಗ | 8 | 9 | -1 | 1 | 1 |

........2

| | | | | | | |
|---|---|---|---|---|---|---|
| 5 | ಶ್ರೀ ಶ್ರೀ ಶಿವಲಿಂಗೇಶ್ವರ ಸ್ವಾಮಿ. ಸ.ಪ್ರ.ದ.ಕಾ. ಚನ್ನಗಿರಿ | 68 | 69 | -1 | 3 | 3 |
| 6 | ಸ.ಪ್ರ.ದ.ಕಾ., ಸಿದ್ದಕಟ್ಟೆ. ಬಂಟ್ವಾಳ | 14 | 16 | -2 | 2 | 2 |
| 7 | ಶ್ರೀಮತಿ. ರುಕ್ಮಿಣಿ ಶೆಡ್ತಿ ಸ್ಮಾರಕ ರಾಷ್ಟ್ರೀಯ. ಸ.ಪ್ರ.ದ.ಕಾ., ಬಾರ್ಕೂರು. ಉಡುಪಿ | 52 | 55 | -3 | 1 | 1 |

ಮುಖ್ಯ ಆಡಳಿತಾಧಿಕಾರಿಗಳು
ಕಾಲೇಜು ಶಿಕ್ಷಣ ಇಲಾಖೆ

<u>ಇವರಿಗೆ</u>:

1) ಜಂಟಿ ನಿರ್ದೇಶಕರು ಕಾಲೇಜು ಶಿಕ್ಷಣ ಇಲಾಖೆ, ಪ್ರಾದೇಶಿಕ ಕಛೇರಿ, ಮೈಸೂರು, ಶಿವಮೊಗ್ಗ, ಮಂಗಳೂರು.
2) ಮೇಲ್ಕಂಡ ಕಾಲೇಜುಗಳ ಪ್ರಾಂಶುಪಾಲರುಗಳಿಗೆ.
3) ಮಾಹಿತಿ ತಂತ್ರಜ್ಞಾನ ಅಧಿಕಾರಿಗಳು, ಕಾಲೇಜು ಶಿಕ್ಷಣ ಇಲಾಖೆ, ಆಯುಕ್ತರ ಕಛೇರಿ, ಬೆಂಗಳೂರು- ಇಲಾಖೆಯ ವೆಬ್‌ಸೈಟ್ ನಲ್ಲಿ ಅಪ್ಲೋಡ್ ಮಾಡಲು ತಿಳಿಸಿದೆ.